ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

22

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 11-12-202

# ನೃಪತುಂಗ ವಿವಿ, ಸ್ಟಾಂಪ್ ತಿದ್ದುಪಡಿ ಮಸೂದೆ ಮೇಲ್ಮನೆಯಲ್ಲಿ ಪಾಸ್

ಕ.ಪ್ರ 11/12/20

ವಿಧಾನ ಪರಿಷತ್: ಬೆಂಗಳೂರಿನ ಸರ್ಕಾರಿ ವಿಜ್ಞಾನ ಕಾಲೇಜನ್ನು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದಿಂದ ಪ್ರತ್ಯೇಕಿಸಿ ನೃಪತುಂಗ ವಿಶ್ವವಿದ್ಯಾಲಯವನ್ನಾಗಿ ಮಾಡುವ, ರಾಜ್ಯದಲ್ಲಿ ದೂರ ಶಿಕ್ಷಣವನ್ನು ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯಕ್ಕೆಮಾತ್ರ ಸೀಮಿತಗೊಳಿಸುವ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮತ್ತು ಕೆಲವು ಇತರ ಕಾನೂನು (2ನೇ ತಿದ್ದುಪಡಿ) ವಿಧೇಯಕ-2020ಕ್ಕೆ ವಿಧಾನ ಪರಿಷತ್ ಒಪ್ಪಿಗೆ ಸೂಚಿಸಿದೆ. ವಿಧಾನ ಸಭೆಯಲ್ಲಿ ಬುಧವಾರ ಅಂಗೀಕಾರವಾಗಿದ್ದ ಈ ಮಸೂದೆಯನ್ನು ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್ ಅಶ್ವತ್ಥನಾರಾಯಣ ಪರಿಷತ್‌ನಲ್ಲಿ ಮಂಡಿಸಿದರು. ಬೆಂಗಳೂರು ಕೇಂದ್ರ ವಿವಿಯ ಹೆಸರನ್ನು ಬೆಂಗಳೂರು ನಗರ ವಿವಿಯನ್ನಾಗಿ ಬದಲಾಯಿಸುವುದು, ಮಹಾರಾಣಿ ಕ್ಲಸ್ಟರ್ ವಿವಿ ಬೆಂಗಳೂರು ಮತ್ತು ಮಂಡ್ಯ ವಿವಿಗೆ ಪ್ರಥಮ ಕುಲಪತಿಗಳನ್ನು ನೇಮಿಸುವ ಪ್ರಸ್ತಾಪವನ್ನು ಈ ವಿಧೇಯಕ ಹೊಂದಿದೆ. ವಿಧೇಯಕದ ಮೇಲಿನ ಚರ್ಚೆ ವೇಳೆ ಪ್ರಾಮಾಣಿಕರನ್ನು ಕುಲಪತಿಗಳನ್ನಾಗಿ ನೇಮಿಸಿ ಎಂದು ಪ್ರತಿಪಕ್ಷಗಳ ಶಾಸಕರು ಆಗ್ರಹಿಸಿದರು.